Kannada - Agape ಸ್ಕ್ರಿಪ್ಚರ್ಸ್ - God's Love Letter Scriptures

ಯೋಹಾನನು 15:9 ತಂದೆಯು ನನ್ನನ್ನು ಪ್ರೀತಿಸಿದ ಹಾಗೆಯೇ ನಾನು ನಿಮ್ಮನ್ನು ಪ್ರೀತಿಸಿದ್ದೇನೆ; ನೀವು ನನ್ನ ಪ್ರೀತಿಯಲ್ಲಿ ನೆಲೆಯಾಗಿರ್ರಿ.

ಯೆಶಾಯ 43:1 ಈಗಲಾದರೋ ಓ ಯಾಕೋಬೇ, ಇಸ್ರಾಯೇಲೇ ನಿನ್ನನ್ನು ಸೃಷ್ಟಿಸಿದಾತನೂ ರೂಪಿಸಿದಾತನೂ ಆದ ಕರ್ತನು ಇಂತೆನ್ನುತ್ತಾನೆ--ಹೆದರಬೇಡ, ನಾನು ನಿನ್ನನ್ನು ವಿಮೋಚಿಸಿದೆನಲ್ಲಾ ನಿನ್ನ ಹೆಸರು ಹಿಡಿದು ಕರೆದೆನಲ್ಲಾ; ನೀನು ನನ್ನವನೇ.

ಯೆರೆಮಿಯ 1:5 ನಾನು ನಿನ್ನನ್ನು ಹೊಟ್ಟೆಯಲ್ಲಿ ನಿರ್ಮಿಸುವದಕ್ಕಿಂತ ಮುಂಚೆ ನಿನ್ನನ್ನು ತಿಳಿದಿದ್ದೆನು. ನೀನು ಗರ್ಭದಿಂದ ಹೊರಗೆ ಬರುವದಕ್ಕಿಂತ ಮುಂಚೆ ನಿನ್ನನ್ನು ಪರಿಶುದ್ಧ ಮಾಡಿದೆನು; ನಿನ್ನನ್ನು ಜನಾಂಗಗಳಿಗೆ ಪ್ರವಾದಿಯನ್ನಾಗಿ ನೇಮಿಸಿದೆನು ಅಂದನು.

ಯೋಹಾನನು 15:16 ನೀವು ನನ್ನನ್ನು ಆರಿಸಿಕೊಂಡಿಲ್ಲ; ಆದರೆ ನಾನು ನಿಮ್ಮನ್ನು ಆರಿಸಿ ಕೊಂಡು, ನೀವು ಹೋಗಿ ಫಲಕೊಡುವಂತೆಯೂ ನಿಮ್ಮ ಫಲವು ನೆಲೆಗೊಂಡಿರುವಂತೆಯೂ ನಿಮ್ಮನ್ನು ನೇಮಿಸಿದ್ದೇನೆ. ಆದಕಾರಣ ನೀವು ನನ್ನ ಹೆಸರಿನಲ್ಲಿ ತಂದೆಯನ್ನು ಏನು ಕೇಳಿಕೊಂಡರೂ ಆತನು ಅದನ್ನು ನಿಮಗೆ ಕೊಡುವನು.

3 ಯೋಹಾನನು 1:2 ಪ್ರಿಯನೇ, ನಿನ್ನ ಆತ್ಮವು ಅಭಿವೃದಿ ಹೊಂದಿರುವ ಪ್ರಕಾರವೇ ಎಲ್ಲಾ ವಿಷಯಗಳಿಗಿಂತ ನೀನು ಸ್ವಸ್ಥನಾಗಿದ್ದು ಕ್ಷೇಮಹೊಂದಿ ಅಭಿವೃದ್ಧಿಯಾಗ ಬೇಕೆಂದು ನಾನು ಅಪೇಕ್ಷಿಸುತ್ತೇನೆ.

ಯೆಶಾಯ 43:4 ನೀನು ನನ್ನ ದೃಷ್ಟಿಯಲ್ಲಿ ಅಮೂಲ್ಯನೂ ಮಾನ್ಯನೂ ಪ್ರಿಯನೂ ಆಗಿರುವದರಿಂದ ನಾನು ನಿನಗೋಸ್ಕರ ಮನುಷ್ಯರನ್ನೂ ನಿನ್ನ ಪ್ರಾಣಕ್ಕೆ (ಪ್ರತಿಯಾಗಿ) ಜನಾಂಗಗಳನ್ನೂ ಕೊಡುವೆನು.

ಯೆರೆಮಿಯ 31:3 ಹಿಂದಿನಂತೆ ಕರ್ತನು ಬಂದು ನನಗೆ ಕಾಣಿಸಿಕೊಂಡು--ಹೌದು, ಶಾಶ್ವತವಾದ ಪ್ರೀತಿ ಯಿಂದ ನಿನ್ನನ್ನು ಪ್ರೀತಿ ಮಾಡಿದ್ದೇನೆ; ಆದದರಿಂದ ಪ್ರೀತಿ ದಯೆಗಳಿಂದ ನಿನ್ನನ್ನು ಎಳೆದಿದ್ದೇನೆ.

ಹೋಶೇ 11:8 ಎಫ್ರಾಯಾಮೇ, ನಾನು ನಿನ್ನನ್ನು ಬಿಟ್ಟು ಬಿಡುವದು ಹೇಗೆ? ಇಸ್ರಾಯೇಲೇ, ನಿನ್ನನ್ನು ನಾನು ಬಿಡಿಸುವದು ಹೇಗೆ? ನಾನು ನಿನ್ನನ್ನು ಅದ್ಮದ ಹಾಗೆ ಮಾಡುವದು ಹೇಗೆ? ನಾನು ನಿನ್ನನ್ನು ಜೆಬೋಯಾಮಿನ ಹಾಗೆ ಸ್ಥಾಪಿಸುವದು ಹೇಗೆ? ನನ್ನ ಹೃದಯವು ನನ್ನಲ್ಲಿ ತಿರುಗಿಕೊಂಡಿದೆ. ನನ್ನ ಪಶ್ಚಾತ್ತಾಪಗಳು ಒಟ್ಟಿಗೆ ಹತ್ತಿ ಕೊಂಡಿವೆ.

ಯೋಹಾನನು 3:16 ದೇವರು ಲೋಕವನ್ನು ಎಷ್ಟೋ ಪ್ರೀತಿಮಾಡಿ ತನ್ನ ಒಬ್ಬನೇ ಮಗನನ್ನು ಕೊಟ್ಟನು; ಆತನನ್ನು ನಂಬುವ ಯಾವನಾದರೂ ನಾಶವಾಗದೆ ನಿತ್ಯಜೀವ ವನ್ನು ಪಡೆದವನಾಗಿರುವನು.

ಯೆಶಾಯ 49:15,16 ತನ್ನ ಗರ್ಭದ ಮಗನ ಮೇಲೆ ಕರುಣಿಸದೆ ಒಬ್ಬ ಹೆಂಗಸು ತನ್ನ ಮೊಲೇ ಕೂಸನ್ನು ಮರೆತಾಳೇ? ಹೌದು, ಅವಳು ಮರೆಯಬಹುದು, ಆದರೂ ನಾನು ನಿನ್ನನ್ನು ಮರೆ ಯುವದಿಲ್ಲ. 16 ಇಗೋ, ನಾನು ನನ್ನ ಅಂಗೈಗಳಲ್ಲಿ ನಿನ್ನನ್ನು ಕೆತ್ತಿಕೊಂಡಿದ್ದೇನೆ; ನಿನ್ನ ಗೋಡೆಗಳು ಸದಾ ನನ್ನ ಕಣ್ಣೆದುರಿನಲ್ಲಿವೆ.

ಯೆಶಾಯ 41:13 ನಿನಗೆ ಸಹಾಯ ಮಾಡುತ್ತೇನೆಂದು ನಿನಗೆ ಹೇಳುವ ಕರ್ತನೂ ನಿನ್ನ ದೇವರೂ ಆಗಿರುವ ನಾನೇ ನಿನ್ನ ಕೈಹಿಡಿಯುತ್ತೇನಲ್ಲಾ.

ಮತ್ತಾಯನು 28:20 ಇದಲ್ಲದೆ ನಾನು ನಿಮಗೆ ಆಜ್ಞಾಪಿಸಿದ್ದೆಲ್ಲವನ್ನು ಕೈಕೊಳ್ಳುವ ಹಾಗೆ ಅವರಿಗೆ ಬೋಧಿಸಿರಿ; ಮತ್ತು ಇಗೋ, ಲೋಕಾಂತ್ಯದ ವರೆಗೂ ಯಾವಾಗಲೂ ನಾನು ನಿಮ್ಮ ಸಂಗಡ ಇದ್ದೇನೆ ಅಂದನು. ಆಮೆನ್.

ಯೋಹಾನನು 14:1 ನಿಮ್ಮ ಹೃದಯವು ಕಳವಳಗೊಳ್ಳದೆ ಇರಲಿ; ನೀವು ದೇವರನ್ನು ನಂಬಿರಿ, ನನ್ನನ್ನೂ ನಂಬಿರಿ.

ಯೆಶಾಯ 41:14 ಹುಳುವಾದ ಯಾಕೋಬೇ, ಮತ್ತು ಇಸ್ರಾಯೇಲ್ ಜನವೇ, ಭಯಪಡಬೇಡ; ನಾನೇ ನಿನಗೆ ಸಹಾಯ ಮಾಡುತ್ತೇನೆಂದು ಕರ್ತನೂ ನಿನ್ನ ವಿಮೋಚಕನೂ ಇಸ್ರಾಯೇಲಿನ ಪರಿಶುದ್ಧನೂ ಹೇಳುತ್ತಾನಲ್ಲಾ!

ಯೆಶಾಯ 43:2 ನೀನು ಜಲರಾಶಿಯನ್ನು ದಾಟಿ ಹೋಗುವಾಗ ನಾನು ನಿನ್ನೊಂದಿಗಿರುವೆನು; ನದಿಗಳನ್ನು ನೀನು ದಾಟುವಾಗ ಅವು ನಿನ್ನನ್ನು ಮುಳುಗಿಸುವದಿಲ್ಲ; ಬೆಂಕಿಯಲ್ಲಿ ನೀನು ನಡೆಯುವಾಗ ಸುಡಲ್ಪಡುವದಿಲ್ಲ; ಇಲ್ಲವೆ

ಜ್ವಾಲೆಯು ನಿನ್ನನ್ನು ದಹಿಸದು.

ಕೀರ್ತನೆಗಳು 23:1-6 ಕರ್ತನು ನನ್ನ ಕುರುಬನು; ಕೊರತೆಪಡೆನು. 2 ಆತನು ಹಸರುಗಾವಲುಗಳಲ್ಲಿ ನನ್ನನ್ನು ತಂಗುವಂತೆ ಮಾಡುತ್ತಾನೆ. ಶಾಂತವಾದ ನೀರುಗಳ ಪಕ್ಕದಲ್ಲಿ ನನ್ನನ್ನು ನಡಿಸುತ್ತಾನೆ. 3 ನನ್ನ ಪ್ರಾಣವನ್ನು ಪುನರ್ಜೀವಿಸ ಮಾಡುತ್ತಾನೆ. ನೀತಿಯ ದಾರಿಗಳಲ್ಲಿ ತನ್ನ ಹೆಸರಿನ ನಿಮಿತ್ತ ನನ್ನನ್ನು ನಡಿಸುತ್ತಾನೆ. 4 ಹೌದು, ನಾನು ಮರಣದ ನೆರಳಿನ ಕಣಿವೆಯಲ್ಲಿ ನಡೆದರೂ ಕೇಡಿಗೆ ಭಯಪಡೆನು; ಯಾಕಂದರೆ ನೀನು ನನ್ನ ಸಂಗಡ ಇದ್ದೀ; ನಿನ್ನ ಕೋಲೂ ದೊಣ್ಣೆಯೂ ನನ್ನನ್ನು ಆದರಿಸುತ್ತವೆ. 5 ನನ್ನ ವೈರಿಗಳ ಎದುರಿನಲ್ಲಿ ನನ್ನ ಮುಂದೆ ಮೇಜನ್ನು ಸಿದ್ಧಮಾಡುತ್ತೀ; ನೀನು ನನ್ನ ತಲೆಯನ್ನು ಎಣ್ಣೆಯಿಂದ ಅಭಿಷೇಕಿಸುತ್ತೀ; ನನ್ನ ಪಾತ್ರೆಯು ತುಂಬಿ ಹೊರಸೂಸುತ್ತದೆ. 6 ನಿಶ್ಚಯವಾಗಿ ಒಳ್ಳೇತನವೂ ಕರುಣೆಯೂ ನನ್ನ ಜೀವನದ ದಿವಸ ಗಳಲ್ಲೆಲ್ಲಾ ನನ್ನನ್ನು ಹಿಂಬಾಲಿಸುವವು; ನಾನು ಕರ್ತನ ಮನೆಯಲ್ಲಿ ಎಂದೆಂದಿಗೂ ವಾಸಮಾಡುವೆನು.

ಯೋಹಾನನು 14:27 ನಾನು ನಿಮಗೆ ಸಮಾಧಾನವನ್ನು ಬಿಟ್ಟು ಹೋಗುತ್ತೇನೆ, ನನ್ನ ಸಮಾಧಾನವನ್ನು ನಾನು ನಿಮಗೆ ಕೊಡುತ್ತೇನೆ; ಲೋಕವು ಕೊಡುವ ರೀತಿಯಲ್ಲಿ ನಾನು ನಿಮಗೆ ಕೊಡುವದಿಲ್ಲ, ನಿಮ್ಮ ಹೃದಯವು ಕಳವಳಗೊಳ್ಳ ದಿರಲಿ ಇಲ್ಲವೆ ಅಂಜದಿರಲಿ.

ಫಿಲಿಪ್ಪಿಯವರಿಗೆ 4:7 ಆಗ ಎಲ್ಲಾ ಗ್ರಹಿಕೆಯನ್ನೂ ಮಿೀರುವ ದೇವರ ಶಾಂತಿಯು

ನಿಮ್ಮ ಹೃದಯಗಳನ್ನೂ ಮನಸ್ಸು ಗಳನ್ನೂ ಕ್ರಿಸ್ತ ಯೇಸುವಿನ ಮೂಲಕ ಕಾಯುವದು.

ಜ್ಞಾನೋಕ್ತಿಗಳು 3:24 ನೀನು ಮಲಗುವಾಗ ನಿನಗೆ ಹೆದರಿಕೆ ಇರುವದಿಲ್ಲ, ಹೌದು, ನೀನು ಮಲಗಿಕೊಳ್ಳುವಿ. ನಿನ್ನ ನಿದ್ರೆಯು ಸುಖವಾಗಿರುವದು.

ಕೀರ್ತನೆಗಳು 4:8 ಸಮಾಧಾನವಾಗಿ ಮಲಗಿ ನಿದ್ರೆ ಸಹ ಮಾಡುವೆನು; ಯಾಕಂದರೆ ಕರ್ತನೇ, ನೀನೊಬ್ಬನೇ ನನ್ನನ್ನು ಸುರ ಕ್ಷಿತವಾಗಿ ವಾಸಿಸುವಂತೆ ಮಾಡುತ್ತೀ.

ಕೀರ್ತನೆಗಳು 33:18 ಇಗೋ, ಕರ್ತನ ಕಣ್ಣು ಆತನಿಗೆ ಭಯಪಡುವ ವರ ಮೇಲೆಯೂ ಆತನ ಕರುಣೆಯನ್ನು ಎದುರು ನೋಡುವವರ ಮೇಲೆಯೂ ಅದೆ.

ರೋಮಾಪುರದವರಿಗೆ 5:2 ಈಗ ನಾವು ನೆಲೆ ಗೊಂಡಿರುವ ಈ ಕೃಪೆಯಲ್ಲಿ ಆತನ ಮುಖಾಂತರವೇ ನಂಬಿಕೆಯಿಂದ ಪ್ರವೇಶವಾದದರಿಂದ ದೇವರ ಮಹಿ ಮೆಯ ನಿರೀಕ್ಷೆಯಲ್ಲಿ ಉಲ್ಲಾಸಿಸುತ್ತೇವೆ.

ಯೆಶಾಯ 55:12 ನೀವು ಆನಂದದೊಡನೆ ಹೋಗುವಿರಿ ಸಮಾಧಾನದಿಂದ ನಡಿಸಲ್ಪಡುವಿರಿ; ಪರ್ವತಗಳು ಮತ್ತು ಗುಡ್ಡಗಳು ನಿಮ್ಮ ಮುಂದೆ ಹರ್ಷಧ್ವನಿಗೈಯುವವು. ಹೊಲದ ಮರಗಳೆಲ್ಲಾ ಚಪ್ಪಾಳೆ ಹೊಡೆಯುವವು.

ಯೋಹಾನನು 16:22 ಆದದರಿಂದ ಈಗ ನಿಮಗೆ ದುಃಖವುಂಟು; ಆದರೆ ನಾನು ನಿಮ್ಮನ್ನು ತಿರಿಗಿ ನೋಡುವೆನು; ಆಗ ನಿಮ್ಮ ಹೃದಯವು ಉಲ್ಲಾಸಿಸುವದು; ನಿಮ್ಮ

ಆನಂದವನ್ನು ನಿಮ್ಮಿಂದ ಯಾರೂ ತೆಗೆಯುವದಿಲ್ಲ.

ಲೂಕನು 12:9 ಆದರೆ ಯಾವನು ಮನುಷ್ಯರ ಮುಂದೆ ನನ್ನನ್ನು ಅಲ್ಲಗಳೆಯುವನೋ ಅವನು ದೇವದೂತರ ಮುಂದೆ ಅಲ್ಲಗಳೆಯಲ್ಪಡುವನು.

ಮತ್ತಾಯನು 10:30 ಆದರೆ ನಿಮ್ಮ ತಲೆಯ ಕೂದಲುಗಳೆಲ್ಲಾ ಲೆಕ್ಕಿಸಲ್ಪಟ್ಟಿವೆ.

ಯೆಶಾಯ 54:10 ಪರ್ವತಗಳು ಹೊರಟುಹೋಗುವವು, ಮತ್ತು ಗುಡ್ಡಗಳು ತೆಗೆದುಹಾಕಲ್ಪಡುವವು; ಆದರೆ ನನ್ನ ದಯೆಯು ನಿನ್ನನ್ನು ಬಿಟ್ಟುಹೋಗದು ಇಲ್ಲವೆ ನನ್ನ ಸಮಾಧಾನದ ಒಡಂಬಡಿಕೆಯು ತೆಗೆಯಲ್ಪಡುವದಿಲ್ಲ ಎಂದು ನಿನ್ನ ಮೇಲೆ ಕರುಣೆಯನ್ನು ಇಟ್ಟಿರುವ ಕರ್ತನು ಹೇಳುತ್ತಾನೆ.

ಮತ್ತಾಯನು 11:28 ಕಷ್ಟಪಡುವವರೇ ಮತ್ತು ಭಾರಹೊತ್ತವರೇ, ನೀವೆಲ್ಲರೂ ನನ್ನ ಬಳಿಗೆ ಬನ್ನಿರಿ, ನಾನು ನಿಮಗೆ ವಿಶ್ರಾಂತಿಯನ್ನು ಕೊಡುವೆನು.

ಪರಮ ಗೀತ 2:10 ನನ್ನ ಪ್ರಿಯನು ಮಾತಾಡಿ--ಏಳು, ನನ್ನ ಪ್ರಿಯಳೇ, ನನ್ನ ಸುಂದರಿಯೇ, ಹೊರಟು ಬಾ.

ಹೋಶೇ 2:14,19,20 ಆದದರಿಂದ ಇಗೋ, ನಾನು ಅವಳನ್ನು ಮೋಹಿಸಿ ಅವಳನ್ನು ಅರಣ್ಯದೊಳಗೆ ಕರೆದುಕೊಂಡು ಬಂದು ಅವಳ ಸಂಗಡ ಹಿತಕರವಾಗಿ ಮಾತನಾಡು ವೆನು. 19 ನಿನ್ನನ್ನು ನನಗೆ ಸದಾ ಕಾಲಕ್ಕೆ ನಿಶ್ಚಿತ್ತಾರ್ಥ ಮಾಡಿಕೊಳ್ಳುವೆನು; ಹೌದು, ನೀತಿ ಯಿಂದಲೂ ನ್ಯಾಯದಿಂದಲೂ ದಯೆಯಿಂದಲೂ ಕರುಣೆಯಿಂದಲೂ ನನ್ನನ್ನು ನಿನಗೆ ನಿಶ್ಚಿತ್ತಾರ್ಥಮಾಡಿ ಕೊಳ್ಳುವೆನು. 20 ನಾನು

ನಿನ್ನನ್ನು ನಂಬಿಕೆಯಿಂದಲೇ ನಿಶ್ಚಿತಾರ್ಥ ಮಾಡಿಕೊಳ್ಳುವೆನು; ಆಗ ನೀನು ಕರ್ತನನ್ನು ತಿಳಿದುಕೊಳ್ಳುವಿ.

ವಿಮೋಚನಕಾಂಡ 3:14 ಆಗ ದೇವರು ಮೋಶೆಗೆ--ಇರುವಾತನೇ ಆಗಿದ್ದೇನೆ, ಆ ಇರುವಾತನು ನನ್ನನ್ನು ನಿಮ್ಮ ಬಳಿಗೆ ಕಳುಹಿಸಿದ್ದಾನೆ ಎಂದು ಇಸ್ರಾಯೇಲ್ ಮಕ್ಕಳಿಗೆ ಹೇಳಬೇಕು ಅಂದನು.

ಹೋಶೇ 13:4 ಆದಾಗ್ಯೂ ನಾನು ಐಗುಪ್ತದಿಂದ ನಿನ್ನ ದೇವರಾಗಿರುವ ಕರ್ತನಾಗಿದ್ದೇನೆ, ನೀನು ನನ್ನ ಹೊರತು ಯಾವ ದೇವರನ್ನೂ ತಿಳಿದುಕೊಳ್ಳಬಾರದು; ಯಾಕಂದರೆ ನನ್ನ ಹೊರತು ನಿನಗೆ ಬೇರೆ ರಕ್ಷಕನು ಇಲ್ಲ.

ಯೋಹಾನನು 15:14 ನಾನು ನಿಮಗೆ ಆಜ್ಞಾಪಿಸಿರುವವುಗಳನ್ನು ಮಾಡಿದರೆ ನೀವು ನನ್ನ ಸ್ನೇಹಿತರಾಗಿರುವಿರಿ.

ಪ್ರಕಟನೆ 3:20 ಇಗೋ, ನಾನು ಬಾಗಿಲ ಬಳಿಯಲ್ಲಿ ನಿಂತುಕೊಂಡು ತಟ್ಟುತ್ತಾ ಇದ್ದೇನೆ; ಯಾವನಾದರೂ ನನ್ನ ಸ್ವರವನ್ನು ಕೇಳಿ ಬಾಗಿಲನ್ನು ತೆರೆದರೆ ನಾನು ಒಳಗೆ ಬಂದು ಅವನ ಸಂಗಡ ಊಟ ಮಾಡುವೆನು, ಅವನು ನನ್ನ ಸಂಗಡ ಊಟ ಮಾಡುವನು.

Pastor T. John Franklin
Church of Salvation, Healing, and Deliverance
COS-HAD.org